ಪದವಿ ಪೂರ್ವ ಕಾಲೇಜು ಮಂಜೂರಾತಿ

825 (1086) ಶ್ರೀ ವಿಶ್ವನಾಥ್ ಎಸ್.ಆರ್. (ಯಲಹಂಕ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಯಲಹಂಕ ಮತಕ್ಷೇತ್ರ ವ್ಯಾಪ್ತಿಯ ಹೆಸರುಘಟ್ಟ ಹೋಬಳಿ ರಾಜಾನುಕುಂಟೆ ಗ್ರಾಮ ಹಾಗೂ ಯಲಹಂಕ ಉಪನಗರಗಳಲ್ಲಿ ಎರಡು ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ;

ಆ) ಹಾಗಿದ್ದಲ್ಲಿ, ಶೈಕ್ಷಣಿಕ ವರ್ಷದಿಂದಲೇ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಲು ಸಾಧ್ಯವೇ? (ವಿವರ ನೀಡುವುದು);

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಪ್ರಸ್ತಾವನೆ ಬಂದಿರುತ್ತದೆ.

ಆ) ಸರ್ಕಾರದ ಆದೇಶ ಸಂಖ್ಯೆ: ಇಡಿ 451 ಯೋಯೋಕ 2009 ದಿನಾಂಕ: 20/02/2010 ರಲ್ಲಿ ಪ್ರಸ್ತುತ ಮಂಜೂರಾಗಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸುವವರೆಗೆ ಯಾವುದೇ ಹೊಸ ಕಾಲೇಜುಗಳನ್ನು ಮಂಜೂರು ಮಾಡದಿರಲು ತೀರ್ಮಾನಿಸಲಾಗಿದೆ.

ಪಶುವೈದ್ಯರ ಹುದ್ದೆಗಳನ್ನು ತುಂಬುವ ಪ್ರಕ್ರಿಯೆ ಹಾಗೂ ಇತರೆ

949 (913) ಶ್ರೀ ಹ್ಯಾರೀಸ್ ಎನ್.ಎ. (ಶಾಂತಿನಗರ) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಶುಸಂಗೋಪನಾ ಇಲಾಖೆಯಲ್ಲಿ ಖಾಲಿಯಿರುವ ಪಶುವೈದ್ಯರ ಹುದ್ದೆಗಳೆಷ್ಟು; ಅವುಗಳನ್ನು ಭರ್ತಿ ಮಾಡಲು ಸರಕಾರ ಕೈಗೊಂಡ ಕ್ರಮಗಳೇನು;

ಆ) ವಿವಿಧ ವರ್ಗಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರಕಾರದ ತ್ವರಿತ ಕ್ರಮಗಳೇನು;